# ಕನ್ನಡದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನ

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು **ಪ್ರಪ್ರಥಮವಾಗಿ ಕನ್ನಡದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನವನ್ನು** ಜೆ.ಎಸ್.ಎಸ್. ಕಲಾ, ವಾಣಿಜ್ಯ ಮತ್ತು ವಿಜ್ಞಾನ (ಸ್ವಾಯತ್ತ) ಕಾಲೇಜಿನ ಸಹಯೋಗದೊಂದಿಗೆ **ಮೈಸೂರಿನಲ್ಲಿ 2017ರ ನವೆಂಬರ್ 24 & 25 ರಂದು (ಶುಕ್ರವಾರ ಮತ್ತು ಶನಿವಾರ) "ವಿಜ್ಞಾನ, ತಂತ್ರಜ್ಞಾನ ಮತ್ತು ಸಮಾಜ"** ಎಂಬ ಕೇಂದ್ರ ವಿಷಯದ ಮೇಲೆ ಆಯೋಜಿಸುತ್ತಿದೆ.

**ಜೀವಮಾನ ಸಾಧನೆ ಪ್ರಶಸ್ತಿ:**

ಕನ್ನಡದಲ್ಲಿ ವಿಜ್ಞಾನ ಸಂವಹನಕ್ಕೆ ಅನನ್ಯ ಕೊಡುಗೆಯನ್ನು ನೀಡಿರುವ ಪ್ರಸ್ತುತ ಮೈಸೂರಿನಲ್ಲಿ ನೆಲೆಸಿರುವ ಖ್ಯಾತ ವಿಜ್ಞಾನ ಲೇಖಕರಾದ **ಪ್ರೊ. ಜೆ. ಆರ್. ಲಕ್ಷ್ಮಣರಾವ್** ಅವರನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು **"ಜೀವಮಾನ ಸಾಧನೆ"** ಪ್ರಶಸ್ತಿಗೆ ಆಯ್ಕೆ ಮಾಡಿದೆ. ಈ ಪ್ರಶಸ್ತಿಯು ರೂ. 50,000/-ಗಳ ನಗದು ಮತ್ತು ಸನ್ಮಾನ ಪತ್ರವನ್ನು ಒಳಗೊಂಡಿರುತ್ತದೆ. ಸನ್ಮಾನಿತರಿಗೆ ಪ್ರಶಸ್ತಿಯನ್ನು ದಿನಾಂಕ 11ನೇ ನವೆಂಬರ್ 2017 ರಂದು ಅವರ ಸ್ವಗೃಹದಲ್ಲೇ ಪ್ರದಾನ ಮಾಡಲಾಗುವುದು.

ಕೇಂದ್ರ ವಿಷಯಕ್ಕೆ ಸಂಬಂಧಿಸಿದ ವಿಷಯಗಳ ಮೇಲೆ ವಿದ್ವತ್‌ಪೂರ್ಣ ಉಪನ್ಯಾಸಗಳನ್ನು ಕನ್ನಡದಲ್ಲಿ ಹೆಸರಾಂತ ವೈಜ್ಞಾನಿಕ ಸಂಸ್ಥೆಗಳ ವಿಶೇಷ ಪರಿಣಿತ ಸಂಪನ್ಮೂಲ ತಜ್ಞರಿಂದ ಆಯೋಜಿಸಲಾಗಿದೆ ಅಲ್ಲದೆ, ಸದರಿ ಸಮ್ಮೇಳನದಲ್ಲಿ ಈ ಕೆಳಕಂಡ ವಿಷಯಗಳಲ್ಲಿ ವಿಚಾರಗೋಷ್ಠಿಗಳನ್ನು ಏರ್ಪಡಿಸಲಾಗಿದೆ :

- **21ನೇ ಶತಮಾನದಲ್ಲಿ ಮೂಲ ವಿಜ್ಞಾನ ಶಿಕ್ಷಣ**
- **ವಿಜ್ಞಾನ ಸಂವಹನ**
- **ಕೃಷಿ ಮತ್ತು ಜಲ ಸಂರಕ್ಷಣೆ**

**ಕನ್ನಡದಲ್ಲಿ ವಿಜ್ಞಾನ ಕವಿತಗಳ ವಾಚನಕ್ಕೆ ಒಂದು ಕವಿಗೋಷ್ಠಿಯನ್ನು** ಸಹ ಏರ್ಪಡಿಸಲಾಗುತ್ತಿದೆ.

ಸುಮಾರು 600 ಪ್ರತಿನಿಧಿಗಳು ಭಾಗವಹಿಸಲು ಅವಕಾಶ ಕಲ್ಪಿಸಲಾಗುವುದು. ಮೂಲ ಮತ್ತು ಅನ್ವಯಿಕ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ಸಂಶೋಧನಾ ಪ್ರಾತ್ಯಕ್ಷಿಕೆಗಳನ್ನು ಕನ್ನಡದಲ್ಲಿ ಮಂಡಿಸಲು ಸಹ ಯುವ ವಿಜ್ಞಾನಿಗಳಿಗೆ ಅವಕಾಶವನ್ನು ಕಲ್ಪಿಸಲಾಗಿದೆ.